| ಕರ್ನಾಟಕ ವಿಧಾನ ಪರಿಷತ್ತು | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: | 12(42) |
| ಸದಸ್ಯರ ಹೆಸರು : | ಶ್ರೀ ಎನ್ ಅಪ್ಪಾಜಿಗೌಡ ( ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ: | 07.12.2020 |
| ಉತ್ತರಿಸುವವರು: | ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಅರಣ್ಯ ಇಲಾಖೆಯ ವಿವಿಧ ವೃಂದಗಳ ಜೇಷ್ಠತಾ ಪಟ್ಟಿಯನ್ನು ಸರ್ಕಾರ ರಚಿಸಿದ ಸಮಿತಿಯ ವರದಿಯಂತೆ ಪೂರ್ಣ ಪ್ರಮಾಣದಲ್ಲಿ ಅನುಷ್ಠಾನಗೊಳಿಸಿದೆಯೇ ; | ಸರ್ಕಾರ ರಚಿಸಿರುವ ಸಮಿತಿಯ ವರದಿಯನ್ನು ನೌಕರರ ಜೇಷ್ಠತಾ ಪಟ್ಟಿಯನ್ನು ತಯಾರಿಸುವಾಗ ಪರಿಗಣನೆಗೆ ತೆಗೆದುಕೊಳ್ಳಬೇಕೆಂದು ಸಂಬಂಧಿಸಿದ ಸಕ್ಷಮ ಪ್ರಾಧಿಕಾರಿಗಳಿಗೆ ಸೂಚಿಸಲಾಗಿತ್ತು. ಅದರಂತೆ ಎಲ್ಲಾ ಸಕ್ಷಮ ಪ್ರಾಧಿಕಾರಿಗಳು ವಿಧಿ ವಿಧಾನಗಳಂತೆ ಜೇಷ್ಠತಾ ಪಟ್ಟಿಗಳನ್ನು ಅಧಿಸೂಚಿಸಿದ್ದಾರೆ. |
| ಆ. | ಉಪ ವಲಯ ಅರಣ್ಯಾಧಿಕಾರಿ ವೃಂದದ ರಾಜ್ಯ ಮಟ್ಟದ ಸಂಯೋಜಿತ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸದಿರಲು ಕಾರಣವೇನು ; | ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಗಳು 1957ರ ನಿಯಮ 10 ರನ್ವಯ ಸಂಬಂಧಿಸಿದ ವೃಂದಗಳ ಜೇಷ್ಠತಾ ಪಟ್ಟಿಯನ್ನು ಸಕ್ಷಮ ನೇಮಕಾತಿ ಪ್ರಾಧಿಕಾರ ತಯಾರಿಸಿ ಪ್ರಕಟಿಸಬೇಕು. ಉಪ ವಲಯ ಅರಣ್ಯಾಧಿಕಾರಿ ವೃಂದದ ಜೇಷ್ಠತಾ ಪಟ್ಟಿಯನ್ನು ತಯಾರಿಸಲು ವೃತ್ತ ಮಟ್ಟದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ / ಅರಣ್ಯ ಸಂರಕ್ಷಣಾಧಿಕಾರಿಗಳು ನೇಮಕಾತಿ ಪ್ರಾಧಿಕಾರಿಯಾಗಿದ್ದು, ಜೇಷ್ಠತಾ ಪಟ್ಟಿಗಳನ್ನು ಪ್ರಕಟಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ. ಅದರಂತೆ, ಸಕ್ಷಮ ಪ್ರಾಧಿಕಾರಿಗಳಾದ ಆಯಾ ವೃತ್ತಗಳ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು / ಅರಣ್ಯ ಸಂರಕ್ಷಣಾಧಿಕಾರಿಗಳು ಜೇಷ್ಠತಾ ಪಟ್ಟಿಗಳನ್ನು ಅನುಸೂಚಿಸಿರುವುದರಿಂದ, ರಾಜ್ಯ ಮಟ್ಟದ ಸಂಯೋಜಿತ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸುವ ಪ್ರಮೇಯ /ಪ್ರಶ್ನೆ ಉದ್ಭವಿಸುವುದಿಲ್ಲ. |
| ಇ. | ವಲಯ ಅರಣ್ಯಾಧಿಕಾರಿಗಳ ವೃಂದದ ರಾಜ್ಯ ಮಟ್ಟದ ಜೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಿ ಪ್ರಕಟಿಸುವಾಗ ಮುಂಬಡ್ತಿ ನೌಕರರ ಅಂತರ ಜೇಷ್ಠತೆಯನ್ನು ಪೋಷಕ ವೃಂದವಾದ ರಾಜ್ಯ ಮಟ್ಟದ ಸಂಯೋಜಿತ ಜೇಷ್ಠತಾ ಪಟ್ಟಿಯನ್ನು ಪರಿಗಣಿಸದೇ ತಯಾರಿಸಿರುವುದು ನಿಜವೇ; ಇದರಿಂದಾಗಿ ಅರಣ್ಯಾಧಿಕಾರಿಗಳು ಸೇವಾ ಸೌಲಭ್ಯಗಳಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; | ಆಯಾ ವೃತ್ತಗಳ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು / ಅರಣ್ಯ ಸಂರಕ್ಷಣಾಧಿಕಾರಿಗಳು, ಅಧಿಸೂಚಿಸಿದ ಉಪ ವಲಯ ಅರಣ್ಯಾಧಿಕಾರಿಗಳ ಜೇಷ್ಠತಾ ಪಟ್ಟಿಗಳನ್ನು ಆಧರಿಸಿ ರಾಜ್ಯ ಮಟ್ಟದ ವಲಯ ಅರಣ್ಯಾಧಿಕಾರಿಗಳ ಜೇಷ್ಠತಾ ಪಟ್ಟಿಗಳನ್ನು ನಿಯಮಗಳಂತೆ ಸಿದ್ಧಪಡಿಸಲಾಗಿದೆ. ಅದರಂತೆ ಸಂಬಂಧಿಸಿದ ಅರಣ್ಯಾಧಿಕಾರಿಗಳಿಗೆ ಸೇವಾ ಸೌಲಭ್ಯಗಳನ್ನು ನೀಡಲಾಗಿದೆ. |
| ಈ. | ಹಾಗಿದ್ದಲ್ಲಿ, ಸದರಿ ಲೋಪಗಳನ್ನು ಸರಿಪಡಿಸುವ ಕುರಿತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಕಲ್ಯಾಣ ಸಮಿತಿಯು ಪತ್ರವನ್ನು ಬರೆದಿದ್ದರೂ ಸಹ ಯಾವುದೇ ಕ್ರಮವನ್ನು ಅನುಸರಿಸದಿರುವ ಅಧಿಕಾರಿ / ನೌಕರರುಗಳ ಮೇಲೆ ಕೈಗೊಂಡಿರುವ ಕ್ರಮಗಳೇನು? (ವಿವರಗಳನ್ನು ಒದಗಿಸುವುದು) | ಸಕ್ಷಮ ಪ್ರಾಧಿಕಾರವು ಕರಡು ಜೇಷ್ಠತಾ ಪಟ್ಟಿಯನ್ನು ಹೊರಡಿಸಿದಾಗ ಭಾದಿತ ಸರ್ಕಾರಿ ನೌಕರರು ತಮ್ಮ ಆಕ್ಷೇಪಣೆಗಳನ್ನು ದಾಖಲೆ ಸಮೇತ ಸಂಬಂಧಿಸಿದ ಪ್ರಾಧಿಕಾರಿಗೆ ನೀಡಲು ಅವಕಾಶವಿದೆ. ಸಕ್ಷಮ ಪ್ರಾಧಿಕಾರವು ಅಂತಹ ಆಕ್ಷೇಪಣೆಗಳನ್ನು ಪರಿಗಣಿಸಿ ಅಂತಿಮ ಅಧಿಸೂಚನೆಯನ್ನು ಪ್ರಕಟಿಸುತ್ತದೆ. ಒಂದು ವೇಳೆ ಯಾರಾದರೂ ಭಾದಿತ ನೌಕರರು ತಮ್ಮ ಆಕ್ಷೇಪಣೆಗಳನ್ನು ಸಕ್ಷಮ ಪ್ರಾಧಿಕಾರವು ಸೂಕ್ತವಾಗಿ ಪರಿಗಣಿಸಿಲ್ಲ ಎಂದು ಭಾವಿಸಿದ್ದಲ್ಲಿ, ಆ ಕುರಿತು ಮೇಲ್ಮನವಿಯನ್ನು ಕ್ಷೇತ್ರ ವ್ಯಾಪ್ತಿಯ ನ್ಯಾಯಾಲಯದಲ್ಲಿ ಸಲ್ಲಿಸಬಹುದಾಗಿದೆ. |

**(ಆನಂದ್ ಸಿಂಗ್)**

ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ.